# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(5)/ಪಿಆರ್/63/19-20

ಆಯುಕ್ತರವರ ಕಛೇರಿ
ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 02-08-2019

**ಸುತ್ತೋಲೆ**

**ವಿಷಯ:** ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿಕಾರಿ / ನೌಕರರುಗಳು ಅನಾವಶ್ಯಕವಾಗಿ ಕೇಂದ್ರ ಕಛೇರಿಗೆ ಕಛೇರಿ ವೇಳೆಯಲ್ಲಿ ಭೇಟಿ ನೀಡುತ್ತಿರುವ ಬಗ್ಗೆ.

-------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಲಯ, ವಿಭಾಗ ಮತ್ತು ಉಪ ವಿಭಾಗದ ವಿವಿಧ ಕಛೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ವೃಂದದ ಅಧಿಕಾರಿ / ನೌಕರರುಗಳು ಕಛೇರಿ ವೇಳೆಯಲ್ಲಿ ತಮ್ಮ ತಮ್ಮ ಕಛೇರಿಯಲ್ಲಿ ಹಾಜರಿದ್ದು ಸಾರ್ವಜನಿಕ ಸೇವೆಯನ್ನು ನೀಡದೇ ಕಛೇರಿ ಮೇಲಾಧಿಕಾರಿಗಳ ಗಮನಕ್ಕೂ ತಾರದೇ ಚಲನವಲನ ಪುಸ್ತಕದಲ್ಲಿ ದಾಖಲಿಸದೇ ಅನಾವಶ್ಯಕವಾಗಿ ಕೇಂದ್ರ ಕಛೇರಿಗೆ ಭೇಟಿ ನೀಡಿ, ಕಛೇರಿಯ ಕೆಲಸ ಕಾರ್ಯಗಳನ್ನು ನಿರ್ವಹಿಸದೇ ಕಾಲಹರಣ ಮಾಡುತ್ತಿರುವುದು ಕಂಡು ಬಂದಿರುತ್ತದೆ.

ಈ ಹಿನ್ನೆಲೆಯಲ್ಲಿ ಪಾಲಿಕೆಯ ಯಾವುದೇ ಅಧಿಕಾರಿ / ನೌಕರರುಗಳು ಕೇಂದ್ರ ಕಛೇರಿಗೆ ಭೇಟಿ ನೀಡಲು ಸೂಕ್ತ ಕಾರಣವಿಲ್ಲದ ಹೊರತು ಅನಗತ್ಯವಾಗಿ ಕೇಂದ್ರ ಕಛೇರಿಗೆ ಭೇಟಿ ನೀಡುವುದನ್ನು ಕಡ್ಡಾಯವಾಗಿ ನಿಷೇಧಿಸಿದೆ. ಅಧಿಕಾರಿ / ನೌಕರರುಗಳ ಯಾವುದೇ ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ಇಲಾಖಾ ಮುಖ್ಯಸ್ಥರುಗಳ ಮೂಲಕ ಸಮುಚಿತ ಮಾರ್ಗದಲ್ಲಿ ಮನವಿ ಸಲ್ಲಿಸಲು ಈ ಮೂಲಕ ಸೂಚಿಸಲಾಗಿದೆ. ಪಾಲಿಕೆಯ ಕೇಂದ್ರ ಕಛೇರಿಯಿಂದ ಹೊರಡಿಸಲಾಗುವ ಎಲ್ಲಾ ಸುತ್ತೋಲೆಗಳು / ಆದೇಶಗಳು / ವರ್ಗಾವಣೆ / ಮುಂಬಡ್ತಿ / ಜೇಷ್ಠತಾ ಪಟ್ಟಿಗಳು / ಇತರೇ ಆದೇಶಗಳನ್ನು ಪಾಲಿಕೆಯ ಅಧಿಕೃತ ವೆಬ್‌ಸೈಟ್ ಆದ http://bbmp.gov.in ಅಳವಡಿಸಲಾಗುತ್ತಿದ್ದು, ಸದರಿ ವೆಬ್‌ಸೈಟ್‌ಗೆ ಭೇಟಿ ನೀಡಿ ಡೌನ್‌ಲೋಡ್ ಮಾಡಿಕೊಳ್ಳಲು ಸೂಚಿಸಿದೆ.

ಮೇಲ್ಕಂಡ ಸೂಚನೆಗಳನ್ನು ಉಲ್ಲಂಘಿಸಿ ಅನಗತ್ಯವಾಗಿ ಯಾವುದೇ ಅಧಿಕಾರಿ / ನೌಕರರುಗಳು ಕೇಂದ್ರ ಕಛೇರಿಯಲ್ಲಿ ಓಡಾಡುವುದು ಕಂಡು ಬಂದಲ್ಲಿ ನಿಯಮಾನುಸಾರ ಶಿಸ್ತುಕ್ರಮ ಜರುಗಿಸಲಾಗುವುದು.

ಆಯುಕ್ತರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು : ಪೂಜ್ಯ ಮಹಾಪೌರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಉಪ ಮಹಾಪೌರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಆಯುಕ್ತರು / ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಎಲ್ಲಾ ವಲಯ ಅಪರ / ಜಂಟಿ ಆಯುಕ್ತರು ರವರಿಗೆ ಕಳುಹಿಸಿದೆ.
: ಅಧ್ಯಕ್ಷರು, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸ್ಥಾಯಿ ಸಮಿತಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.

. . . 2 .

: ಕೌನ್ಸಿಲ್ ಕಾರ್ಯದರ್ಶಿಯವರಿಗೆ ಕಳುಹಿಸುತ್ತಾ, ಎಲ್ಲಾ ಸ್ಥಾಯಿ ಸಮಿತಿಗಳ ಅಧ್ಯಕ್ಷರುಗಳಿಗೆ, ಆಡಳಿತ ಪಕ್ಷದ ನಾಯಕರು, ವಿರೋಧ ಪಕ್ಷದ ನಾಯಕರುಗಳಿಗೆ ಕಳುಹಿಸಿಕೊಡಲು ಕೋರಿದೆ.

: ಮಾಹಿತಿ ತಂತ್ರಜ್ಞಾನ ಸಲಹೆಗಾರರು ರವರಿಗೆ ಕಳುಹಿಸುತ್ತಾ, ಸದರಿ ಸುತ್ತೋಲೆಯನ್ನು ಪಾಲಿಕೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸಲು ಸೂಚಿಸಿದೆ.

: ಸಂಬಂಧಪಟ್ಟ ಎಲ್ಲಾ ಬಟವಾಡೆ ಅಧಿಕಾರಿಗಳಿಗೆ / ಅಧಿಕಾರಿ / ನೌಕರರುಗಳಿಗೆ

: ಕಛೇರಿ ಪ್ರತಿ.